# ಆದೇಶ ವಾಪಸ್‌ಗೆ ಸಿದ್ದರಾಮಯ್ಯ ಆಗ್ರಹ

ಬೆಂಗಳೂರು: ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಸರ್ಕಾರದ ಇಲಾಖೆ/ಸಂಸ್ಥೆಗಳಲ್ಲಿ ನೌಕರರಾಗಿ ಆಯ್ಕೆಯಾಗಿ ಜಾತಿ ಸಿಂಧುತ್ವ ಪ್ರಮಾಣ ಪತ್ರ ಪಡೆಯುವ ಪ್ರಕರಣಗಳಲ್ಲಿ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದಿಂದ (ಜಾಗೃತ ಕೋಶ) ವರದಿ ಪಡೆದು ಪರಿಶೀಲಿಸಿ ಪ್ರಮಾಣ ಪತ್ರ ನೀಡಬೇಕು ಎಂಬ ಆದೇಶ



ಅವೈಜ್ಞಾನಿಕ ಎಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಆರೋಪಿಸಿದ್ದಾರೆ. ಈ ಕುರಿತು ಸಿಎಂ ಬಿ.ಎಸ್. ಯಡಿಯೂರಪ್ಪ ಅವರಿಗೆ ಪತ್ರ ಬರೆದಿರುವ ಸಮುದಾಯದ ಹಿತಾಸಕ್ತಿ ಕಾಪಾಡಬೇಕಾದ ಸರ್ಕಾರ, ಅಮಾಯಕರಿಗೆ ಕಿರುಕುಳ ನೀಡುವ ಆದೇಶ ತಕ್ಷಣದಿಂದಲೇ ಹಿಂತೆಗೆದು ಕೊಳ್ಳಬೇಕೆಂದು ಒತ್ತಾಯಿಸಿದ್ದಾರೆ. ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ನಂತರ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ಜಾತಿಗಳ ಹಿತಾಸಕ್ತಿ ಕಾಪಾಡು ವವರು ಇಲ್ಲದಂತಾಗಿದೆ ಎಂಬ ಅಭಿಪ್ರಾಯ ಸಾರ್ವಜನಿಕರಲ್ಲಿದೆ. ಇದಕ್ಕೆ ಸಮಾಜ ಕಲ್ಯಾಣ ಇಲಾಖೆಯಿಂದ ಹೊರಡಿಸಿರುವ ಆದೇಶವೇ ಸಾಕ್ಷಿ ಎಂದು ಹೇಳಿದ್ದಾರೆ.